# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 1204 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | : | 19.12.2024 |
| **ಉತ್ತರಿಸುವ ಸಚಿವರು** | : | ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉಡುಪಿ ಜಿಲ್ಲೆಯ ಬಾರ್ಕೂರು ಇತಿಹಾಸ ಪ್ರಸಿದ್ಧ ಸ್ಥಳವಾಗಿದ್ದು, ಈ ಪ್ರದೇಶವನ್ನು ಹಂಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ಯಾವ ಯೋಜನೆಯನ್ನು ಹಾಕಿಕೊಂಡಿದೆ; (ವಿವರ ನೀಡುವುದು) | ಪ್ರವಾಸೋದ್ಯಮ ಇಲಾಖೆಯಿಂದ ಉಡುಪಿ ಜಿಲ್ಲೆಯಲ್ಲಿ ಬಾರ್ಕೂರು ಕೋಟೆಯನ್ನು ಪ್ರವಾಸಿ ಸ್ಥಳವನ್ನಾಗಿ ಗುರುತಿಸಲಾಗಿದೆ.<br><br>ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಪ್ರಸಾದ್ ಯೋಜನೆ 2.0 ಅಡಿಯಲ್ಲಿ ಬಾರ್ಕೂರು ಕೋಟೆಯನ್ನು ರೂ.1000.00 ಲಕ್ಷಗಳ ಮೊತ್ತದಲ್ಲಿ ಅಭಿವೃದ್ಧಿಪಡಿಸಲು ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯಕ್ಕೆ ಶಿಫಾರಸ್ಸು ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |
| ಆ) | ಈ ಪ್ರದೇಶದ ಉತ್ಖನನ ಹಾಗೂ ಸ್ಮಾರಕಗಳ ರಕ್ಷಣೆಗೆ ಕಳೆದ 3 ವರ್ಷಗಳಲ್ಲಿ ವೆಚ್ಚ ಮಾಡಿದ ಮೊತ್ತವೆಷ್ಟು; ಇಲ್ಲವಾದಲ್ಲಿ, ಕರಾವಳಿ ಭಾಗದ ಈ ಇತಿಹಾಸ ಪ್ರಸಿದ್ಧ ಸ್ಥಳವನ್ನು ಕಡೆಗಣಿಸಲು ಕಾರಣವೇನು; | ಉಡುಪಿ ಜಿಲ್ಲೆಯ ಬಾರ್ಕೂರಿನಲ್ಲಿ ಕಳೆದ 3 ವರ್ಷಗಳ ಅವಧಿಯಲ್ಲಿ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಿಂದ ಉತ್ಖನನಕ್ಕೆ ವೆಚ್ಚವನ್ನು ಮಾಡಿರುವುದಿಲ್ಲ. ಪ್ರವಾಸೋದ್ಯಮ ಇಲಾಖೆಯಿಂದ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ. ಈ ಪ್ರದೇಶದಲ್ಲಿ ರಾಜ್ಯ ಸಂರಕ್ಷಿತ ಸ್ಮಾರಗಳು ಯಾವುದೂ ಇರುವುದಿಲ್ಲ. |
| ಇ) | ವರ್ಷಗಳ ಹಿಂದೆ ಆಳಪೋತ್ಸವ ಎಂಬ ಕಾರ್ಯಕ್ರಮದ ಮೂಲಕ ತುಳು ಅರಸರ ಸಾಧನೆಗಳು ಕೊಡುಗೆಗಳನ್ನು ಸಮಾಜಕ್ಕೆ ನೆನಪು ಮಾಡಿಕೊಳ್ಳುವ ಕಾರ್ಯಕ್ರಮಗಳನ್ನು ಸರ್ಕಾರದ ವತಿಯಿಂದ ಏರ್ಪಡಿಸಲಾಗಿದ್ದು, ಪ್ರಸ್ತುತ ಈ ರೀತಿಯ ಕಾರ್ಯಕ್ರಮವನ್ನು ಯಾವಾಗ ಏರ್ಪಡಿಸಲಾಗುವುದು; ಈ ಕುರಿತು ಸರ್ಕಾರದ ನಿಲುವೇನು; | 2018-19ನೇ ಸಾಲಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ "ಆಳುಪೋತ್ಸವ" ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಉಡುಪಿ ಜಿಲ್ಲಾಡಳಿತದ ವತಿಯಿಂದ ಈ ಬಗ್ಗೆ 2018-19ನೇ ಸಾಲಿನಲ್ಲಿ ಸಲ್ಲಿಸಲಾದ ಪ್ರಸ್ತಾವನೆ ಮೇರೆಗೆ ಸರ್ಕಾರದ ಆದೇಶ ಸಂಖ್ಯೆ: ಪ್ರಇ/32/ಪ್ರವಾಇ/2019, ದಿನಾಂಕ:08-02-2019ರನ್ವಯ ಇಲಾಖಾ ವತಿಯಿಂದ ಪ್ರಾಯೋಜಕತ್ವವಾಗಿ ರೂ.25.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಉಡುಪಿ ಜಿಲ್ಲೆ, ಉಡುಪಿ ರವರಿಗೆ ಬಿಡುಗಡೆ ಮಾಡಲಾಗಿರುತ್ತದೆ.<br><br>ಮುಂದುವರೆದು, ಸದರಿ ಉತ್ಸವವನ್ನು ಏರ್ಪಡಿಸುವ ಬಗ್ಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾಡಳಿತಗಳು ಕ್ರಮವಹಿಸಬೇಕಿರುತ್ತದೆ. ಈ ಕುರಿತು ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆರವರಿಂದ ಅನುದಾನ ಕೋರಿ ಪ್ರಸ್ತಾವನೆ ಬಂದಲ್ಲಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ನಿಯಮಾನುಸಾರ ಪರಿಶೀಲಿಸಲಾಗುವುದು. |

| | | |
|---|---|---|
| ಈ) | ಪ್ರವಾಸೋದ್ಯಮ ಇಲಾಖೆಯಡಿ ಬರುವ ನಿಗಮಗಳಲ್ಲಿ ನೇಮಕಗೊಂಡ ನಿವೃತ್ತ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಅವರಿಗೆ ನೀಡಲಾಗುತ್ತಿರುವ ವೇತನ ಎಷ್ಟು; ವಾಹನ ಸೌಲಭ್ಯ ನೀಡಲಾಗುತ್ತಿದೆಯೇ; ಯಾವ ಹಂತದ ನೌಕರರಿಗೆ ನೀಡಲಾಗುತ್ತದೆ; (ನೇಮಕಗೊಂಡ ನಿವೃತ್ತ ನೌಕರರ ಹೆಸರು ಮತ್ತು ಅವರಿಗೆ ನೀಡಲಾಗುತ್ತಿರುವ ಸೌಲಭ್ಯಗಳ ವಿವರದೊಂದಿಗೆ ಹುದ್ದೆವಾರು ಮಾಹಿತಿ ನೀಡುವುದು) | ಪ್ರವಾಸೋದ್ಯಮ ಇಲಾಖೆಯಡಿ ಕರ್ನಾಟಕ ಪ್ರವಾಸೋದ್ಯಮ ಮೂಲಸೌಲಭ್ಯ ನಿಗಮ, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ, ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ ಮತ್ತು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದಲ್ಲಿ ನೇಮಕಗೊಂಡಿರುವ ನಿವೃತ್ತ ನೌಕರರುಗಳ ವಿವರವನ್ನು **ಅನುಬಂಧ**ದಲ್ಲಿ ಒದಗಿಸಿದೆ. |

ಸಂಖ್ಯೆ:ಟಿಒಆರ್ 307 ಟಿಡಿವಿ 2024

**(ಎಚ್.ಕೆ. ಪಾಟೀಲ್)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

## ಅನುಬಂಧ

| ಕ್ರ. ಸಂ. | ಹೆಸರು ಮತ್ತು ಹುದ್ದೆ | ಮಾಸಿಕ ವೇತನ | ಇನ್ನಿತರೆ ಸೌಲಭ್ಯ |
|---|---|---|---|
| **ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ** | | | |
| **1.** | ರತ್ನಾಕರ್ ಎ.ಎಸ್, ನಿಗಮದ ಅಧ್ಯಕ್ಷರ ಪ್ರವಾಸೋದ್ಯಮ ಸಲಹೆಗಾರರು (Retainership ಆಧಾರದ ಮೇಲೆ) | ರೂ.50,000/- | ವಾಹನ ಸೌಲಭ್ಯ |
| **ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ** | | | |
| 1. | ಮೊಹಮ್ಮದ್ ಗಯಾಜ್ ವ್ಯವಸ್ಥಾಪಕರು (ಹಣಕಾಸು) | ರೂ.60,000/- | - |
| 2. | ಯತಿರಾಜ್ ಬಿ.ಎನ್ ಹಿರಿಯ ಆಡಳಿತಾಧಿಕಾರಿ | ರೂ.50,000/- | ಕಛೇರಿ ವಾಹನ |
| **ಕರ್ನಾಟಕ ಪ್ರವಾಸೋದ್ಯಮ ಮೂಲಸೌಲಭ್ಯ ನಿಗಮ(ಕೆಟಿಐಎಲ್)** | | | |
| ಕೆಟಿಐಎಲ್ ನಿಗಮದಲ್ಲಿ ನಿವೃತ್ತಿ ಹೊಂದಿದ ಯಾವುದೇ ನೌಕರರನ್ನು ನೇಮಕ ಮಾಡಿಕೊಂಡಿರುವುದಿಲ್ಲ. | | | |
| **ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ** | | | |
| ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ ನಿಗಮದಲ್ಲಿ ನಿವೃತ್ತಿ ಹೊಂದಿದ ಯಾವುದೇ ನೌಕರರನ್ನು ನೇಮಕ ಮಾಡಿಕೊಂಡಿರುವುದಿಲ್ಲ. | | | |